**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಶ್ರೀ.ಡಿ.ವಾಸುದೇವ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ -ಇವರನ್ನು ನಿಲಂಬನೆಯಲ್ಲಿರಿಸುವ ಬಗ್ಗೆ.

ಓದಲಾಗಿದೆ:

ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂಖ್ಯೆ: ಡಿಟಿಇ 11 ಡಿಇಕ್ಯೂ (1) 2014, ದಿನಾಂಕ: 11-03-2015.

ಪ್ರಸ್ತಾವನೆ:

ಮೇಲೆ ಓದಲಾದ ಪತ್ರದಲ್ಲಿ ತಾಂತ್ರಿಕ ಶಿಕ್ಷಣ ನಿರ್ದೇಶಕರು ಶ್ರೀ.ಡಿ.ವಾಸುದೇವ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ-ಇವರು ಸಂಸ್ಥೆಯ ವಿದ್ಯಾರ್ಥಿಗಳೊಂದಿಗೆ ಅನುಚಿತವಾಗಿ ವರ್ತಿಸುತ್ತಿದ್ದು, ವಿದ್ಯಾರ್ಥಿಗಳ ಅಂಕಪಟ್ಟಿ ಮತ್ತಿತರ ದಾಖಲೆಪತ್ರಗಳನ್ನು ನೀಡಲು ಸತಾಯಿಸುವುದು/ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸದಿರುವುದು ಹಾಗೂ ವಿದ್ಯಾರ್ಥಿವೇತನವನ್ನು ನೀಡಲು ವಿಳಂಬಧೋರಣೆಯನ್ನು ಅನುಸರಿಸುವುದು ಮತ್ತು ಅದಕ್ಕಾಗಿ ವಿದ್ಯಾರ್ಥಿಗಳಿಂದ ಹಣವನ್ನು ಕೇಳುವುದು ಮಾಡುತ್ತಿದ್ದು, ಇವರಿಂದ ಸಂಸ್ಥೆಯ ವಿದ್ಯಾರ್ಥಿಗಳಿಗೆ ತೊಂದರೆಯುಂಟಾಗುತ್ತಿರುವುದಾಗಿ ವಿದ್ಯಾರ್ಥಿಗಳು ಹಾಗೂ ಪೋಷಕರಿಂದ ದೂರುಗಳು ಬಂದ ಹಿನ್ನೆಲೆಯಲ್ಲಿ ಹಾಗೂ ಸದರಿಯವರು ಸಂಸ್ಥೆಗೆ ಇಲಾಖೆಯಿಂದ ಒದಗಿಸಲಾದ ಅನುದಾನವನ್ನು ಸಂಪೂರ್ಣವಾಗಿ ಬಳಸಲು ವಿಫಲರಾಗಿ ಸಂಸ್ಥೆಗೆ ಆರ್ಥಿಕ ನಷ್ಟವುಂಟಾಗುವಂತೆ ಮಾಡಿರುವುದು ಕಂಡುಬಂದಿದ್ದರಿಂದ ಈ ಬಗ್ಗೆ ಪೂರ್ವಭಾವಿಯಾಗಿ ಪರಿಶೀಲಿಸಲು ಶ್ರೀ.ಎಸ್.ಎಸ್.ಜೀವರ್ಗಿ., ಪ್ರಾಚಾರ್ಯರು, ಸರ್ಕಾರಿ ಪಾಲಿಟೆಕ್ನಿಕ್, ಕಲಬುರಗಿ-ಇವರ ನೇತೃತ್ವದಲ್ಲಿ ತನಿಖಾತಂಡವನ್ನು ದಿನಾಂಕ: 27.02.2015ರಂದು ಸಂಸ್ಥೆಗೆ ಕಳುಹಿಸಲಾಗಿತ್ತು.

ಶ್ರೀ.ಎಸ್.ಎಸ್.ಜೀವರ್ಗಿ., ನೇತೃತ್ವದ ತನಿಖಾತಂಡವು ಸಂಸ್ಥೆಗೆ ಭೇಟಿನೀಡಿ ಸ್ಥಳತನಿಖೆ ನಡೆಸಿ, ಶ್ರೀ.ಡಿ.ವಾಸುದೇವ., ರವರ ವಿರುದ್ಧ ಸ್ವೀಕೃತವಾಗಿರುವ ದೂರುಗಳು ಸತ್ಯವೆಂದು ಕಂಡುಬರುತ್ತಿರುವುದಾಗಿ ತಮ್ಮ ತನಿಖಾ ವರದಿಯಲ್ಲಿ ತಿಳಿಸಿರುವುದರಿಂದ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳ ನಿಯಮ 10 (1) (ಡಿ)ರನ್ವಯ ಇಲಾಖಾ ವಿಚಾರಣೆಯನ್ನು ಕಾಯ್ದಿರಿಸಿ ನಿಲಂಬನೆಯಲ್ಲಿರಿಸುವ ಬಗ್ಗೆ ಸೂಕ್ತ ಸರ್ಕಾರಿ ಆದೇಶವನ್ನು ಹೊರಡಿಸಬೇಕೆಂದು ಅಥವಾ ಕರ್ನಾಟಕ ನಾಗರೀಕ ಸೇವಾ (ತಾಂತ್ರಿಕ ಶಿಕ್ಷಣ ಇಲಾಖೆಯ ಸಿಬ್ಬಂದಿ ವರ್ಗಾವಣೆ ಮತ್ತು ನಿಯಂತ್ರಣ) ನಿಯಮಗಳು, 2013ರ ನಿಯಮ 15 (ಎ)ರನ್ವಯ ಸದರಿಯವರನ್ನು ಬೇರೊಂದು ಸ್ಥಳಕ್ಕೆ ವರ್ಗಾಯಿಸಿ ಆದೇಶಿಸಬೇಕೆಂದು ತಾಂತ್ರಿಕ ಶಿಕ್ಷಣ ನಿರ್ದೇಶಕರು ತಮ್ಮ ಪ್ರಸ್ತಾವನೆಯಲ್ಲಿ ಕೋರಿರುತ್ತಾರೆ.

ತಾಂತ್ರಿಕ ಶಿಕ್ಷಣ ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಇಡಿ 74 ಡಿಟಿಇ 2015,**
**ಬೆಂಗಳೂರು, ದಿನಾಂಕ: 21ನೇ ಮೇ 2015.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳನ್ನು ಪರಿಶೀಲಿಸಲಾಗಿ, ಶ್ರೀ.ಡಿ.ವಾಸುದೇವ., ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ-ಇವರು ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗದಲ್ಲಿ ಪ್ರಾಂಶುಪಾಲರಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಸಂದರ್ಭದಲ್ಲಿ ಸಂಸ್ಥೆಯ ವಿದ್ಯಾರ್ಥಿಗಳೊಂದಿಗೆ ಅನುಚಿತವಾಗಿ ವರ್ತಿಸಿರುವುದಲ್ಲದೇ ದಕ್ಷತೆಯಿಂದ ಆಡಳಿತ ನಿರ್ವಹಣೆಯನ್ನು ನಡೆಸಲು ವಿಫಲರಾಗಿ ಸಂಸ್ಥೆಗೆ ಆರ್ಥಿಕ ನಷ್ಟವುಂಟಾಗುವುದಕ್ಕೆ ಕಾರಣರಾಗಿದ್ದು, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡಿರುವುದು ಇಲಾಖೆಯು ನಡೆಸಿರುವ ಪೂರ್ವಭಾವಿ ತನಿಖೆಯಿಂದ ಸಾಬೀತಾಗಿದ್ದು, ಈ ಬಗ್ಗೆ ಇಲಾಖಾ ವಿಚಾರಣೆಯನ್ನು

26/5/15

ಕಾಯ್ದಿರಿಸಿ ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು, 1957ರ ನಿಯಮ 10 (1) (ಡಿ)ರನ್ವಯ ನಿಲಂಬನೆಯಲ್ಲಿರಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
21/5/15
(ಬಿ.ನಾಗಭೂಷಣ್),
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ).
21/05/2015

ಗೆ:

1. ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
3. ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ (ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ರವರ ಮುಖಾಂತರ).
4. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ (ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ-ಇವರ ಮುಖಾಂತರ).
5. ಶಾಖಾ ರಕ್ಷಾ ಕಡತ : ಹೆಚ್ಚಿನ ಪ್ರತಿ.

**ಹಿಂಬರಹ ಸಂಖ್ಯೆ:** ಡಿಟಿಇ 11 ಡಿಇಕ್ಯೂ(1) 2014 70/1044 ದಿನಾಂಕ: 27/05/2015

ಮೇಲ್ಕಂಡ ಸರ್ಕಾರದ ಆದೇಶವನ್ನು ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಈ ಕೆಳಕಂಡವರಿಗೆ ಕಳುಹಿಸಲಾಗಿದೆ.

ಆಯುಕ್ತರು
27/5/15

**ಇವರಿಗೆ:-** ಶ್ರೀ. ಡಿ.ವಾಸುದೇವ, ಪ್ರಾಂಶುಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ

**ಪ್ರತಿ – ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ**

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಮುಖ್ಯಮಂತ್ರಿಗಳ ಪತ್ರಿಕಾ ಕಾರ್ಯಾಲಯ, ವಿಕಾಸಸೌಧ, ಬೆಂಗಳೂರು.
3. ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ತಾಂತ್ರಿಕ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು
4. ಕಾರ್ಯದರ್ಶಿಯವರು, ತಾಂತ್ರಿಕ ಪರೀಕ್ಷಾ ಮಂಡಳಿ, ಬೆಂಗಳೂರು (ಸದರಿಯವರ ಇಲಾಖಾ ವಿಚಾರಣೆ ಮುಗಿದು ಅಥವಾ ಮುಂದಿನ ಆದೇಶದವರೆಗೂ ಯಾವುದೇ ಪರೀಕ್ಷಾ ಕಾರ್ಯಗಳಿಗೆ ನೇಮಿಸಬಾರದೆಂದು ಸೂಚಿಸಲಾಗಿದೆ)
5. ಪ್ರಿನ್ಸಿಪಾಲರು, ಸರ್ಕಾರಿ ಪಾಲಿಟೆಕ್ನಿಕ್, ದೇವದುರ್ಗ-ಸದರಿಯವರನ್ನು ಕಾರ್ಯವಿಮುಕ್ತಿಗೊಳಿಸಿ ಇವರ ಪ್ರಭಾರೆಯನ್ನು ತಮ್ಮ ಸಂಸ್ಥೆಯ ಜ್ಯೇಷ್ಠತೆಯಲ್ಲಿ ಹಿರಿಯವರಾದ ಉಪನ್ಯಾಸಕರೊಬ್ಬರಿಗೆ ವಹಿಸಿಕೊಡಲು ಸೂಚಿಸಲಾಗಿದೆ.
6. ನಿರ್ದೇಶಕರ ಆಪ್ತಶಾಖೆಗೆ. ಮಾಹಿತಿಗಾಗಿ.
7. ಇ-ಆಡಳಿತ ವಿಭಾಗ, ಸದರಿ ಆದೇಶವನ್ನು ಇಲಾಖಾ ವೆಬ್‌ಸೈಟ್ ಅಳವಡಿಸುವ ಸೂಕ್ತ ಕ್ರಮಕ್ಕಾಗಿ.
8. ಸಾರ್ವಜನಿಕ ಸಂಪರ್ಕಾಧಿಕಾರಿಗಳು, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.
9. ಇಎಸ್‌ಟಿ(1)ಎ, ಇಎಸ್‌ಟಿ(9), ಇಎಸ್‌ಟಿ(7), ನಿರ್ದೇಶನಾಲಯ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು ಇವರಿಗೆ ಮಾಹಿತಿಗಾಗಿ.